AUGUST 3,2024
ALL INDIA RADIO- DHARWAD
PRADESH SAMACHARA (KANNADA) 7:05 AM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ವಿವೇಕಾದಿತ್ಯ ಕನಿಯಾಲ

<><><>

ಮುಖ್ಯಾಂಶಗಳು:

- ಶೈಕ್ಷಣಿಕ ಮತ್ತು ಸಂಶೋಧನಾ ಚಟುವಟಿಕೆಗಳಿಗೆ, ಭದ್ರ ಬುನಾದಿ ಕಲ್ಪಿಸಲು, ರಾಜ್ಯ ಸರ್ಕಾರ ಬದ್ಧ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ರಾಜ್ಯದ ಪ್ರವಾಹ ಪೀಡಿತ ಜಿಲ್ಲೆಗಳ, ಬಾಧಿತ ಜನರ ಸಂಕ ್ಟ ಆಲಿಸಲು, ಸಚಿವರ ನಿಯೋಜನೆ; ಮುಖ್ಯಮಂತ್ರಿಯವರಿಂದ ಖುದ್ದು ಪರಿಶೀಲನೆ.
- ಗುಡ್ಡ ಹಾಗೂ ಭೂ ಕುಸಿತದ ಹಿನ್ನೆಲೆ; ಪಶ್ಚಿಮಘಟ್ಟದ ಸಂರಕ್ಷಣೆಗೆ ಅಗತ್ಯ ಕ್ರಮ – ಸಚಿವ ಈಶ್ವರ ಖಂಡ್ರೆ.
- ರಾಜ್ಯದ ಕಡಿಮೆ ಇಳುವರಿ ಪ್ರದೇಶದ, 4 ಸಾವಿರ ರೈತರಿಗೆ, ಹೆಕ್ಟರ್‌ಗೆ 6 ಸಾವಿರ ರೂಪಾಯಿ ಪ್ರೋತ್ಸಾಹ ಧನ – ಸಚಿವ ಎನ್. ಚಲುವರಾಯಸ್ವಾಮಿ.

<><><>

ಈಗ ವಾರ್ತೆಗಳ ವಿವರ

<><><>

ಕರ್ನಾಟಕ ಶೈಕ್ಷಣಿಕ ಮತ್ತು ಸಂಶೋಧನಾ ಚಟುವಟಿಕೆಗಳಿಗೆ, ಭದ್ರ ತಳಹದಿ ಕಲ್ಪಿಸುವ ಕಾರ್ಯದಲ್ಲಿ ಹೆಸರುವಾಸಿಯಾಗಿದೆ. ತಾಂತ್ರಿಕತೆ ಆಧಾರಿತ ಅನ್ವೇ ಣೆಯ ಕ್ಷೇತ್ರದಲ್ಲಿ, ರಾಜ್ಯ ಮುಂಚೂಣಿಯಲ್ಲಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

13ನೇ ಬೆಂಗಳೂರು ಇಂಡಿಯಾ ನ್ಯಾನೋ ಸಮ್ಮೇಳನವನ್ನು ಉದ್ಘಾಟಿಸಿ, ಅವರು ಮಾತನಾಡಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಭವಿ ್ಯದಲ್ಲಿ ನ್ಯಾನೋ ತಂತ್ರಜ್ಞಾನ ಆಧಾರಿತ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚಲಿದೆ. ಈ ತಂತ್ರಜ್ಞಾನವನ್ನು ಬಳಸಿ, ಉತ್ಪನ್ನಗಳ ಬೆಲೆ ಗಣನೀಯವಾಗಿ ಕಡಿತ ಗೊಳಿಸಬಹುದಾಗಿದೆ ಎಂದರು.

<><><>

ರಾಜ್ಯದ ಪ್ರವಾಹ ಪೀಡಿತ ಜಿಲ್ಲೆಗಳ, ಬಾಧಿತ ಜನರ ಸಂಕ ್ಟ ಆಲಿಸಲು, ಸಚಿವರನ್ನು ನಿಯೋಜಿಸಿ, ಖುದ್ದು ಪರಿಶೀಲಿಸಲಾಗುವುದು ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ನಿವೇಶನ ಹಂಚಿಕೆ ಮತ್ತು ವಾಲ್ಮೀಕಿ ನಿಗಮದ ವಿವಾದಗಳಲ್ಲಿ ತಮ್ಮ ಪಾತ್ರವಿಲ್ಲ. ವಿಶೇಷ ತನಿಖಾ ದಳ ಎಸ್.ಐ.ಟಿ. ಹಾಗೂ ಸಿ.ಬಿ.ಐ. ತನಿಖೆ ನಡೆಯುತ್ತಿದೆ.

ರಾಜ್ಯಪಾಲರಿಗೆ ಬಿಜೆಪಿಯ ಮಾಜಿ ಸಚಿವ ಮುರುಘೇಶ ನಿರಾಣಿ ಹಾಗೂ ಶಶಿಕಲಾ ಜೊಲ್ಲೆ ವಿರುದ್ಧ ದೂರು ಸಲ್ಲಿಸಿದ್ದರೂ, ಯಾವುದೇ ಕ್ರಮ ಕೈಗೊಳ್ಳಲಿಲ್ಲ; ರಾಜಕೀಯ ದುರುದ್ದೇಶದಿಂದ, ರಾಜ್ಯಪಾಲರು ತಮಗೆ, 'ಕಾರಣ ಕೇಳಿ ನೋಟಿಸ್' ಜಾರಿ ಮಾಡಿದ್ದಾರೆ. ಇದು ಕಾನೂನು ಬಾಹಿರ ಎಂದು, ಮುಖ್ಯಮಂತ್ರಿ ನುಡಿದರು.

ಈಗಾಗಲೇ ಮುಖ್ಯ ಕಾರ್ಯದರ್ಶಿಯವರು, ಎರಡು ಬಾರಿ ಸುಧೀರ್ಘ ಪತ್ರ ಬರೆದು, ರಾಜ್ಯಪಾಲರಿಗೆ ಸ್ಪಷ್ಟನೆ ನೀಡಿದ್ದಾರೆ ಎಂದು, ಸಿದ್ದರಾಮಯ್ಯ ಸಮರ್ಥಿಸಿಕೊಂಡರು.

<><><>

ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಮುಖಂಡರು, ಬೆಂಗಳೂರಿನಿಂದ ಮೈಸೂರಿಗೆ ಇಂದಿನಿಂದ ಪಾದಯಾತ್ರೆ ಆಯೋಜಿಸಿದ್ದು, ಈ ಯಾತ್ರೆ ಯಾವುದೇ ವ್ಯಕ್ತಿಯ ವಿರುದ್ಧ ಅಲ್ಲ; ಬದಲಾಗಿ ಭ್ರಷ್ಟಾಚಾರ ರಹಿತ ಆಡಳಿತ ನೀಡುತ್ತೇವೆ ಎಂದು, ಭರವಸೆ ನೀಡಿ ಅಧಿಕಾರಕ್ಕೆ ಬಂದ, ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಎಂದು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬೆಂಗಳೂರಿನ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

<><><>

ಕೊಡಗು ಜಿಲ್ಲೆಯಲ್ಲಿ, ಮಳೆ ಮತ್ತು ಪ್ರವಾಹದಿಂದ ಹಾನಿಗೀಡಾದ ಸ್ಥಳಗಳಿಗೆ ಭೇಟಿ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಂತ್ರಸ್ತರಿಗೆ ಕೂಡಲೇ ಪರಿಹಾರ ನೀಡಿ, ಪುನರ್ವಸತಿ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪೊನ್ನಂಪೇಟೆ ತಾಲೂಕಿನ ಶ್ರೀಮಂಗಲಕುಟ್ಟದ ಗುಡ್ಡ ಕುಸಿತದ ಸ್ಥಳಕ್ಕೆ ತೆರಳಿ, ಸಂಪರ್ಕ ಕಳೆದುಕೊಂಡಿರುವ 20ಕ್ಕೂ ಹೆಚ್ಚು ಕುಟುಂಬಗಳ ಸುರಕ್ಷತೆಗಾಗಿ, ತೂಗು ಸೇತುವೆ ಮತ್ತು ತುರ್ತಾಗಿ ರಸ್ತೆ ನಿರ್ಮಾಣ ಕೈಗೊಳ್ಳುವಂತೆ ನಿರ್ದೇಶಿಸಿದರು.

ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು, ಗುಡ್ಡ ಕುಸಿತದ ಹಿನ್ನೆಲೆ, ಕೈಗೊಳ್ಳಲಾದ ಸುರಕ್ಷತಾ ಕ್ರಮಗಳು ಹಾಗೂ ಕಾಮಗಾರಿಗಳ ಬಗ್ಗೆ ಮುಖ್ಯಮಂತ್ರಿಯವರಿಗೆ ವಿವರಿಸಿದರು.

<><><>

ಉತ್ತರಕನ್ನಡ ಜಿಲ್ಲೆ, ಅಂಕೋಲಾ ತಾಲೂಕಿನ, ಶಿರೂರು ಹಾಗೂ ಕೇರಳದ ವಯನಾಡ್ ಗುಡ್ಡ ಕುಸಿತದ ದುರ್ಘಟನೆ, ರಾಜ್ಯಕ್ಕೆ ಎಚ್ಚರಿಕೆ ಗಂಟೆಯಾಗಿದೆ. ಪಶ್ಚಿಮಘಟ್ಟದ ಸಂರಕ್ಷಣೆಗೆ, ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು, ಅರಣ್ಯ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ರಾಜ್ಯದ ಪಶ್ಚಿಮಘಟ್ಟ ಪ್ರದೇಶ ವ್ಯಾಪ್ತಿಯಲ್ಲಿ, 2015 ರಿಂದ ಈಚೆಗೆ ಎಲ್ಲ ಅರಣ್ಯ ಒತ್ತುವರಿ ತೆರವುಗೊಳಿಸುವಂತೆ, ಸೂಚಿಸಲಾಗಿದೆ. ಬಡಾವಣೆ, ತೋಟ, ಹೋಂ ಸ್ಟೇ ಮತ್ತು ರೆಸಾರ್ಟ್‌ಗಳ ವಿರುದ್ಧ ಕಾನೂನು ಕ್ರಮ ಜರುಗಿಸಿ, ತೆರವು ಗೊಳಿಸಲು ನಿರ್ದೇಶಿಸಿದ್ದಾಗಿ, ಸಚಿವರು ಜಾಲತಾಣ ಎಕ್ಸ್‌ನಲ್ಲಿ, ಪ್ರಕಟಿಸಿದ್ದಾರೆ.

<><><>

ದಕ್ಷಿಣಕನ್ನಡ ಜಿಲ್ಲೆಯಲ್ಲಿ ಪ್ರಾಕೃತಿಕ ವಿಕೋಪ ನಿರ್ವಹಣೆಗೆ, ಜಿಲ್ಲಾ ವಿಪತ್ತು ಪರಿಹಾರ ನಿಧಿಯಡಿ, 1422 ಲಕ್ಷ 76 ಸಾವಿರ ರೂಪಾಯಿ ಅನುದಾನ ಲಭ್ಯವಿದೆ ಎಂದು, ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಮಂಗಳೂರಿನ ಕೆತ್ತಿಕಲ್ ರಾಷ್ಟ್ರೀಯ ಹೆದ್ದಾರಿಯಲ್ಲಿ, ಗುಡ್ಡ ಕುಸಿಯುವ ಆತಂಕವಿರುವ ಸ್ಥಳಕ್ಕೆ ಭೇಟಿ ನೀಡಿ, ಸಚಿವರು ಪರಿಶೀಲಿಸಿದರು.

ಪರಿಸ್ಥಿತಿಯನ್ನು ಅವಲೋಕಿಸಿ, ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆತ್ತಿಕಲ್ ವಲಯದ ಭೂ ಮಾಫಿಯಾದಿಂದಾಗಿ ಸಮಸ್ಯೆ ಎದುರಾದ ಬಗ್ಗೆ ದೂರುಗಳು ಬಂದಿವೆ. ಉನ್ನತ ಮಟ್ಟದ ತನಿಖೆ ನಡೆಸಲಾಗುವುದು ಎಂದರು.

<><><>

ಕೇರಳದ ವಯನಾಡಿನಲ್ಲಿ ಸಂಭವಿಸಿದ, ಭೂ ಕುಸಿತದ ಸಂತ್ರಸ್ತರ ನೆರವಿಗೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬಿ.ಬಿ.ಎಂ.ಪಿ. 2 ಟ್ರಕ್‌ಗಳಲ್ಲಿ, ಪರಿಹಾರ ಸಾಮಗ್ರಿ ರವಾನಿಸಿದೆ.

ಪಾಲಿಕೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ, ಅಂದಾಜು 25 ಲಕ್ಷ ರೂಪಾಯಿ ನೆರವು ನೀಡಿದ್ದಾರೆ.

ಪರಿಹಾರ ಕಾರ್ಯಗಳ ಮೇಲುಸ್ತುವಾರಿಗಾಗಿ ಕಾರ್ಮಿಕ ಖಾತೆ ಸಚಿವ ಸಂತೋ ್ ಲಾಡ್ ಹಾಗೂ ಇಬ್ಬರು ಐ.ಎ.ಎಸ್. ಅಧಿಕಾರಿಗಳನ್ನು ರಾಜ್ಯ ಸರ್ಕಾರ ನಿಯೋಜಿಸಿದೆ.

<><><>

ಕೇರಳದ ವಯನಾಡು ಜಿಲ್ಲೆಯ, ಮುಂಡಕ್ಕೈ ಮತ್ತು ಚುರಲ್ಮಲ್ ಭೂ ಕುಸಿತ ಪ್ರದೇಶದಲ್ಲಿ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಮುಂದುವರೆದಿದೆ. ಈ ದುರಂತದಲ್ಲಿ ಮೃತಪಟ್ಟವರ ಸಂಖ್ಯೆ 308ಕ್ಕೆ ಏರಿಕೆಯಾಗಿದೆ. 91 ಪರಿಹಾರ ಶಿಬಿರಗಳಲ್ಲಿ, ಸುಮಾರು 7 ಸಾವಿರಕ್ಕೂ ಹೆಚ್ಚು ನಿರಾಶ್ರಿತರಿಗೆ ವಸತಿ ಕಲ್ಪಿಸಲಾಗಿದೆ.

<><><>

ವಯನಾಡಿನ ಗುಡ್ಡ ಕುಸಿತ ಪ್ರಕರಣದಲ್ಲಿ ಮೃತಪಟ್ಟ, ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆಯ, ಕತ್ತರಘಟ್ಟ ಮೂಲದ ಲೀಲಾವತಿ ಮತ್ತು ನಿಹಾಲ್ ಅವರ ಮನೆಗೆ, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಭೇಟಿ ನೀಡಿ ಸಾಂತ್ವನ ಹೇಳಿದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ರಾಜ್ಯದ ಕಡಿಮೆ ಇಳುವರಿ ಪ್ರದೇಶದ, ಸುಮಾರು 4 ಸಾವಿರ ರೈತರನ್ನು ಆಯ್ಕೆ ಮಾಡಲಾಗಿದ್ದು, ಪ್ರತಿ ಹೆಕ್ಟರ್ ಕೃಷಿ ಭೂಮಿಗೆ, 6 ಸಾವಿರ ರೂಪಾಯಿ ಪ್ರೋತ್ಸಾಹ ಧನ ನೀಡಲಾಗುತ್ತಿದೆ ಎಂದು, ಕೃಷಿ ಖಾತೆ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಮಂಡ್ಯ ಜಿಲ್ಲೆ, ನಾಗಮಂಗಲದಲ್ಲಿ ರೈತರಿಗೆ ಬಿತ್ತನೆ ಬೀಜ ವಿತರಿಸಿ, ಮಾತನಾಡಿದರು.

ನಾಲ್ಕೂವರೆ ಸಾವಿರ ರೂಪಾಯಿ ಮೌಲ್ಯದ ಪರಿಕರ ಹಾಗೂ ಒಂದೂವರೆ ಸಾವಿರ ರೂಪಾಯಿ ನಗದು, ನೇರವಾಗಿ ಫಲಾನುಭವಿ ರೈತರ ಖಾತೆಗೆ ಜಮೆಯಾಗುತ್ತಿದೆ. ಅರ್ಹ ರೈತರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಸಚಿವರು, ಕೋರಿದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ, ಪ್ರಸಕ್ತ ಹಂಗಾಮಿನಲ್ಲಿ, 822 ಮೆಟ್ರಿಕ್ ಟನ್ ಮಾವಿನ ಹಣ್ಣನ್ನು, 60 ಅಂತಾರಾಷ್ಟ್ರೀಯ ಸ್ಥಳಗಳಿಗೆ ರವಾನಿಸಿದ್ದು, ದಾಖಲೆ ಎಂದು, ವಿಮಾನ ನಿಲ್ದಾಣದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸತ್ಯಕಿ ರಘುನಾಥ್ ತಿಳಿಸಿದ್ದಾರೆ.

ವಿಮಾನ ನಿಲ್ದಾಣ, ಉತ್ತಮ ಗುಣಮಟ್ಟದ ತಾಜಾ ಉತ್ಪನ್ನಗಳ ರಫ್ತಿನಲ್ಲಿ ತನ್ನ ಸ್ಥಾನವನ್ನು ಬಲಪಡಿಸಿಕೊಂಡಿದೆ. ಆರ್ಥಿಕ ಬೆಳವಣಿಗೆಯಲ್ಲೂ ತನ್ನ ಪಾತ್ರವನ್ನು ಮುಂದುವರೆಸಿಕೊಂಡು ಸಾಗಿದೆ ಎಂದು, ಮಾಹಿತಿ ನೀಡಿದ್ದಾರೆ.

<><><>

ರಾಯಚೂರು ಜಿಲ್ಲೆಗೆ, ಏಮ್ಸ್ ಆಸ್ಪತ್ರೆ ಮಂಜೂರು ಮಾಡಲು ಕೋರಿ, ಕೇಂದ್ರ ಆರೋಗ್ಯ ಖಾತೆ ಸಚಿವ ಜೆ.ಪಿ.ನಡ್ಡಾ ಅವರಿಗೆ, ವೈದ್ಯಕೀಯ ಶಿಕ್ಷಣ ಖಾತೆ ಸಚಿವ ಶರಣಪ್ರಕಾಶ ಪಾಟೀಲ ಅವರು, ಹೊಸ ದಿಲ್ಲಿಯಲ್ಲಿ ಮನವಿ ಪತ್ರ ಸಲ್ಲಿಸಿದ್ದಾರೆ.

ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣದ ಪ್ರಗತಿಗೆ ಹಾಗೂ ಏಮ್ಸ್ ಸ್ಥಾಪಿಸಲು, ಮನವಿ ಮಾಡಿದ್ದಾಗಿ, ಎಕ್ಸ್ ಜಾಲತಾಣದಲ್ಲಿ ಪ್ರಕಟಿಸಿರುವ ಸಚಿವರು, ರಾಜ್ಯದ ಸರಕಾರಿ ವೈದ್ಯಕೀಯ ಶಿಕ್ಷಣ ಕಾಲೇಜುಗಳಲ್ಲಿ, ಶೇಕಡ 15 ಎನ್.ಆರ್.ಐ ಕೋಟಾ ಜಾರಿಗೊಳಿಸುವಂತೆ, ಮನವಿ ಮಾಡಿದ್ದಾಗಿ ತಿಳಿಸಿದ್ದಾರೆ.

<><><>

ಯಾದಗಿರಿ ಜಿಲ್ಲೆ ವಡಗೇರಾ ತಾಲೂಕಿನ ತಡಿಬಿಡಿ ಗ್ರಾಮ ಪಂಚಾಯಿತಿ, ಪ್ಲಾಸ್ಟಿಕ್ ತ್ಯಾಜ್ಯ ತಂದು ಕೊಟ್ಟರೆ, ಅಷ್ಟೇ ತೂಕದ ಸಕ್ಕರೆಯನ್ನು ನೀಡುವ, ಮಾದರಿ ಯೋಜನೆ ಜಾರಿಗೊಳಿಸಿದೆ.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗೋವಿಂದ್ ರಾಠೋಡ್, ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ.

<><><>

ಗೋವಿಂದ್ ರಾಠೋಡ್ ಧ್ವನಿ 19 ಸೆಕೆಂದುಗಳು

<><><>

ಅತ್ಯಧಿಕ ಅಂಗಾಂಗ ದಾನ ಮಾಡಿರುವ ರಾಜ್ಯಗಳ ಪೈಕಿ, ಕರ್ನಾಟಕಕ್ಕೆ 2ನೇ ಸ್ಥಾನ ಲಭಿಸಿದೆ. ಕೇಂದ್ರ ಆರೋಗ್ಯ ಇಲಾಖೆ ನೀಡುವ, ಅತ್ಯುತ್ತಮ ರಾಜ್ಯ ಪ್ರಶಸ್ತಿಗೆ ಭಾಜನವಾಗಿದೆ.

2023 ರಲ್ಲಿ 178 ಜನ ಅಂಗಾಂಗ ದಾನ ಮಾಡಿದ್ದಾರೆ.

ಅಂಗಾಂಗ ದಾನಕ್ಕೆ ವಾಗ್ದಾನ ಮಾಡಿರುವ ಜಿಲ್ಲಾವಾರು ಪಟ್ಟಿಯಲ್ಲಿ, ಬಳ್ಳಾರಿಗೆ ಅಗ್ರಸ್ಥಾನ ದೊರೆತಿದೆ ಎಂದು, ವಾರ್ತಾ ಇಲಾಖೆ ತಿಳಿಸಿದೆ.

<><><>

ಪ್ಯಾರಿಸ್ ಒಲಿಂಪಿಕ್ಸ್ ಕ್ರೀಡಾಕೂಟದ ನೇರ ಪ್ರಸಾರದ ಹಿನ್ನೆಲೆ, ಬೆಳಗ್ಗೆ 7–35ಕ್ಕೆ ಪ್ರಸಾರವಾಗುತ್ತಿದ್ದ ರಾಷ್ಟ್ರೀಯ ವಾರ್ತೆಗಳು, ಈ ತಿಂಗಳ 11ರ ವರೆಗೆ ಬೆಳಗ್ಗೆ 9 ಗಂಟೆ 5 ನಿಮಿ 'ಕ್ಕೆ ಪ್ರಸಾರವಾಗಲಿದೆ.

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

- ಶೈಕ್ಷಣಿಕ ಮತ್ತು ಸಂಶೋಧನಾ ಚಟುವಟಿಕೆಗಳಿಗೆ, ಭದ್ರ ಬುನಾದಿ ಕಲ್ಪಿಸಲು, ರಾಜ್ಯ ಸರ್ಕಾರ ಬದ್ಧ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ರಾಜ್ಯದ ಪ್ರವಾಹ ಪೀಡಿತ ಜಿಲ್ಲೆಗಳ, ಬಾಧಿತ ಜನರ ಸಂಕಷ್ಟ ಆಲಿಸಲು, ಸಚಿವರ ನಿಯೋಜನೆ; ಮುಖ್ಯಮಂತ್ರಿಯವರಿಂದ ಖುದ್ದು ಪರಿಶೀಲನೆ.
- ಗುಡ್ಡ ಹಾಗೂ ಭೂ ಕುಸಿತದ ಹಿನ್ನೆಲೆ; ಪಶ್ಚಿಮಘಟ್ಟದ ಸಂರಕ್ಷಣೆಗೆ ಅಗತ್ಯ ಕ್ರಮ – ಸಚಿವ ಈಶ್ವರ ಖಂಡ್ರೆ.
- ರಾಜ್ಯದ ಕಡಿಮೆ ಇಳುವರಿ ಪ್ರದೇಶದ, 4 ಸಾವಿರ ರೈತರಿಗೆ, ಹೆಕ್ಟರ್‌ಗೆ 6 ಸಾವಿರ ರೂಪಾಯಿ ಪ್ರೋತ್ಸಾಹ ಧನ – ಸಚಿವ ಎನ್. ಚಲುವರಾಯಸ್ವಾಮಿ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 9 ಗಂಟೆ 5 ನಿಮಿಷಕ್ಕೆ.

<><><>